# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ. ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.

ಫೋನ್ ನಂ.: 08282–256166, ಇ–ಮೇಲ್: regexamku@gmail.com, Mob: 7022254997 ವೆಬ್‌ಸೈಟ್: www.kuvempu.ac.in


**Re-Accredited by NAAC with 'A' Grade, Ranked 73rd Place in NIRF– 2019 and Secured 45th Place in SCIMAGO Institutional Rankings**

**ಸಂಖ್ಯೆ:ಕುವಿ:ಪವಿ:ಯುಜಿ–2:2909:2026–27** **ದಿನಾಂಕ: 30–09–2026**

## ಪರಿಷ್ಕೃತ ಅಧಿಸೂಚನೆ

**ವಿಷಯ :** ಅಕ್ಟೋಬರ್/ನವೆಂಬರ್–2026ರ NON-NEP 2019-20 ಮತ್ತು 2020-21ನೇ ಸಾಲಿನ ರಿಪೀಟರ್ಸ್ ಹಾಗೂ 2003ರಿಂದ ದ್ವಿಗುಣ ಅವಧಿ ಮುಗಿದಿರುವ (DOUBLE THE DURATION) ಸ್ನಾತಕ ಪದವಿ ಪರೀಕ್ಷೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

**ಉಲ್ಲೇಖ:** 1. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 02–07–2026.
2. ಈ ಕಛೇರಿ ಅಧಿಸೂಚನೆ ಸಂಖ್ಯೆ: ಸಂಖ್ಯೆ:ಕುವಿ:ಪವಿ:ಯುಜಿ–2: :2026–27 ದಿನಾಂಕ: 28–09–2026.
3. ಈ ಕಛೇರಿ ವಿಶೇಷ ಸೂಚನೆ ಪತ್ರ ಸಂಖ್ಯೆ: ಸಂಖ್ಯೆ:ಕುವಿ:ಪವಿ:ಯುಜಿ–2:2687:2026–27 ದಿನಾಂಕ: 19–09–2026.

*****

ಸ್ನಾತಕ ಪದವಿಗಳ ಲಿಖಿತ/ಪ್ರಾಯೋಗಿಕ ಪರೀಕ್ಷೆಗಳು ಈ ಕೆಳಕಂಡ ಮಾಹೆಯಲ್ಲಿ ಪ್ರಾರಂಭವಾಗುತ್ತವೆ.

| ಪ್ರಾಯೋಗಿಕ/ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕಗಳ ವಿವರ. | |
|---|---|
| 1. | ಲಿಖಿತ ಪರೀಕ್ಷೆಗಳು ನವೆಂಬರ್ ಮೂರನೇ ವಾರದಲ್ಲಿ ಪ್ರಾರಂಭವಾಗುವುದು. |
| 2. | ಪ್ರಾಯೋಗಿಕ ಪರೀಕ್ಷೆಗಳು–ರೆಗ್ಯುಲರ್/ರಿಪೀಟರ್ ವಿದ್ಯಾರ್ಥಿಗಳಿಗೆ– ಲಿಖಿತ ಪರೀಕ್ಷೆಗಳಿಗಿಂತ ಮುಂಚಿತವಾಗಿ |

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ 1 ರಿಂದ 6ನೇ ಸೆಮಿಸ್ಟರ್‌ನ 2019-20 ಮತ್ತು 2020–21ನೇ ಸಾಲಿನ ರಿಪೀಟರ್ಸ್ ಹಾಗೂ 2003ರಿಂದ ದ್ವಿಗುಣ ಅವಧಿ ಮುಗಿದಿರುವ (DOUBLE THE DURATION) ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ತಮ್ಮ ಅರ್ಜಿ / ಪರೀಕ್ಷಾ ಶುಲ್ಕವನ್ನು (ದ್ವಿಗುಣ ಅವಧಿ ಪೂರ್ಣಗೊಳಿಸಿದ ಸೆಮಿಸ್ಟರ್ ವಿದ್ಯಾರ್ಥಿಗಳು ನಿಗದಿತ ಶುಲ್ಕದೊಂದಿಗೆ ರೂ. 5000/– ಗಳ ಹೆಚ್ಚುವರಿ ವಿಶೇಷ ಶುಲ್ಕ ಪಾವತಿಸುವುದು) ಪಾವತಿಸಿ ನಂತರ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ (ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

ಕಡ್ಡಾಯವಾಗಿ ಆನ್‌ಲೈನ್‌ನಲ್ಲಿಯೇ ಅರ್ಜಿ ಸಲ್ಲಿಸುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 8183098136 ಸಂಪರ್ಕಿಸುವುದು. (ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಆನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ತಾಂತ್ರಿಕ ದೋಷವನ್ನು ತಪ್ಪಿಸಬಹುದಾಗಿದೆ.)

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | ಶುಲ್ಕ ಪಾವತಿಗೆ ಕಡೆ ದಿನಾಂಕ | **05–10–2026 ರಿಂದ 27–10–2026 ರವರೆಗೆ** |
| 2 | ವಿಳಂಬ ಶುಲ್ಕ ರೂ. 100/–ರಂತೆ (ಪ್ರತಿ ಸೆಮ್) | **28–10–2026 ರಿಂದ 31–10–2026 ರವರೆಗೆ** |
| 3 | ವಿಳಂಬ ಶುಲ್ಕ ರೂ. 500/–ರಂತೆ (ಪ್ರತಿ ಸೆಮ್) | **01–11–2026 ರಿಂದ 03–11–2026 ರವರೆಗೆ** |
| 4 | ದ್ವಿಗುಣ ಅವಧಿ ಮುಗಿದ ವಿದ್ಯಾರ್ಥಿಗಳು (DOUBLE THE DURATION) ಪರೀಕ್ಷಾ ಶುಲ್ಕದೊಂದಿಗೆ ರೂ.5000/– ವಿಶೇಷ ಶುಲ್ಕವನ್ನು ಆನ್‌ಲೈನ್‌ನಲ್ಲಿಯೇ ಪಾವತಿಸುವುದು. | |

| | B.A/B.Sc/B.Com | | BTA / BBA / B.C.A / B.S.W | |
|---|---|---|---|---|
| 1 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 830/– | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 1415/– |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ. 830/–ಕ್ಕೆ ಒಳಪಟ್ಟು) | ರೂ. 265/– | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ. 1415/–ಕ್ಕೆ ಒಳಪಟ್ಟು) | ರೂ. 320/– |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 175/– | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 175/– |
| 4 | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 320/– | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 320/– |

ಮು.ತಿ.ನೋ

## ವಿದ್ಯಾರ್ಥಿಗಳಿಗೆ ಸೂಚನೆ:

1. ಎಲ್ಲಾ ವಿದಾರ್ಥಿಗಳು 2018–19ನೇ ಸಾಲಿನ NON-NEP ಸೆಮಿಸ್ಟರ್‌ಗಳ ಸಿಲಬಸ್‌ನ್ನು ಓದಿ ಪರೀಕ್ಷೆ ಬರೆಯಬೇಕಾಗುತ್ತದೆ.
2. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು www.kuvempu.ac.in ನಲ್ಲಿ studentportal ಗೆ login ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.
3. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card / Credit Card / Net Banking / Paytm wallet ಮೂಲಕ ನೇರವಾಗಿ ವಿದ್ಯಾರ್ಥಿಯು ವೈಯಕ್ತಿಕ ಅಥವಾ ಪೋಷಕರ ಬ್ಯಾಂಕ್ ಖಾತೆಯಿಂದ ಹಣಪಾವತಿಸಬಹುದಾಗಿದೆ ಹಣ ಪಾವತಿಸಿ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

**ವಿಶೇಷ ಸೂಚನೆ:ವಿದ್ಯಾರ್ಥಿಗಳು Internet Browsing centreನ ಮಾಲಿಕರ ಬ್ಯಾಂಕ್‌ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು ಅಂತರ್‌ಜಾಲದಲ್ಲಿ ಪಾವತಿಸುವಾಗ ಬ್ಯಾಂಕ್‌ನ ಅಥವಾ ಇತರೆ ತಾಂತ್ರಿಕ ಕಾರಣಗಳಿಂದ ಪಾವತಿಯಾದ ಮೊತ್ತಕ್ಕೆ ಖಚಿತತೆ ಸೂಚನೆ ಬರುವುದು ಕನಿಷ್ಠ 15 ನಿಮಿಷ ಆಗಬಹುದಾಗಿದೆ. ಈ ಹಿನ್ನೆಲೆಯಲ್ಲಿ ತಕ್ಷಣವೇ ಮತ್ತೊಮ್ಮೆ ಪಾವತಿಸದೇ ಇರಲು ಸೂಚಿಸಿದೆ. ಒಂದೊಮ್ಮೆ ಒಂದಕ್ಕಿಂತ ಹೆಚ್ಚು ಬಾರಿ ಪಾವತಿಸಿದಲ್ಲಿ 'ಪರೀಕ್ಷಾ ಮಿತ್ರ' Linkನಲ್ಲಿ ಲಭ್ಯವಿರುವ Refund Formನ್ನು ಪಡೆದು ಭರ್ತಿ ಮಾಡಿ ಸೂಕ್ತ ದಾಖಲೆಗಳೊಂದಿಗೆ ಕುಲಸಚಿವರು(ಪ) ಇವರಿಗೆ ಸಲ್ಲಿಸುವುದು. ಮರುಪಾವತಿಗೆ ಕನಿಷ್ಠ ಒಂದು ತಿಂಗಳ ಕಾಲಾವಧಿ ಬೇಕಾಗುತ್ತದೆ.**

## ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಮಾನ್ಯಮಾಡುವುದಿಲ್ಲ.
   **ಪ್ರಾಯೋಗಿಕ ಪರೀಕ್ಷೆಗೆ ಅಗತ್ಯವಾದ ಉತ್ತರ ಪತ್ರಿಕೆ / ಲೇಖನ ಸಾಮಾಗ್ರಿ ಹಾಗೂ ಮುದ್ರಿತ ನಮೂನೆಗಳಿಗೆ ಬೇಡಿಕೆಪಟ್ಟಿಗಳನ್ನು ದಿನಾಂಕ: 28–10–2026ರೊಳಗಾಗಿ ತಲುಪಿಸಲು ಸೂಚಿಸಿದೆ.**
2. ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು **ದಿನಾಂಕ: 28–10–2026ರೊಳಗಾಗಿ,** ಪರೀಕ್ಷಾಂಗ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ.
3. **ಪ್ರಶ್ನೆ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನುOnline-oasis.logisys.org/kusನಲ್ಲಿ ದಿನಾಂಕ: 31–10–2026 ರಂದು ಪ್ರಕಟಿಸಲಾಗುವುದು, ಸದರಿ ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ಪರಿಶೀಲಿಸಿ, ದಿನಾಂಕ: 04–11–2026 ರೊಳಗೆ ಸರಿ ಇದೆ/ಇಲ್ಲ ಎಂದು ಶ್ರೀ ಸಿದ್ಧಲಿಂಗ ಜಿ ಪಾಟೀಲ್, ಉಪಕುಲಸಚಿವರು (ಪರೀಕ್ಷಾಂಗ) ಇವರಿಗೆ ತಿಳಿಸಲು ಸೂಚಿಸಿದೆ.**

R.[illegible] 30/09/26

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವ (ಮೌಲ್ಯಮಾಪನ)
ಕುವೆಂಪು ವಿಶ್ವವಿದ್ಯಾಲಯ
ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451

ಗೆ,

ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಯ ಶಿವಮೊಗ್ಗ / ಚಿಕ್ಕಮಗಳೂರು / ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಗಳು:**

1. ಆಪ್ತಶಾಖೆ;– ಮಾನ್ಯಕುಲಪತಿಯವರು, ಕುಲಸಚಿವರು(ಆಡಳಿತ), ಕುಲಸಚಿವರು (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
4. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
5. ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
6. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ – ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
7. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
8. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9. ಎಲ್ಲಾ ಸ್ನಾತಕ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
10. ಜಿಲ್ಲಾ ವಾರ್ತಾ ಅಧಿಕಾರಿಗಳು, ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ ಮತ್ತು ದಾವಣಗೆರೆ – ಇವರಿಗೆ ಮಾಹಿತಿ ಹಾಗೂ ರಾಜ್ಯವ್ಯಾಪ್ತಿ ಪ್ರಚಾರವಾಗುವಂತೆ ಸುದ್ಧಿ ರೂಪದಲ್ಲಿ ಪ್ರಕಟಿಸಲು ಕಳುಹಿಸಿದೆ.
11. ನಿಲಯದ ನಿರ್ದೇಶಕರು, ಆಕಾಶವಾಣಿ ಕೇಂದ್ರ, ಭದ್ರಾವತಿ / ಚಿತ್ರದುರ್ಗ – ಇದನ್ನು ವಿದ್ಯಾರ್ಥಿಗಳ ಗಮನಕ್ಕಾಗಿ ಪ್ರಕಟಣೆಯ ರೂಪದಲ್ಲಿ ಉಚಿತವಾಗಿ ಭಿತ್ತರಿಸಲು ಕೋರಿದೆ.
12. ಕಛೇರಿ ಪ್ರತಿ.